# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (410) ೪೦೪

ಸದಸ್ಯರ ಹೆಸರು : ಶ್ರೀ ಕೆ.ವಿ.ನಾರಾಯಣಸ್ವಾಮಿ
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 23-09-2020

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಅರ್ಜಿಗಳ ಬಗ್ಗೆ ಮೇಲ್ಮನವಿ ಸಲ್ಲಿಸಿ ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; | ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕಿಗೆ ಸಂಬಂಧಿಸಿದಂತೆ ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ ರವರ ನ್ಯಾಯಾಲಯದಲ್ಲಿ ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108-ಕೆ ಅಡಿಯಲ್ಲಿ ಒಟ್ಟು 39 ಪ್ರಕರಣಗಳು ವಿಚಾರಣಾ ಹಂತದಲ್ಲಿ ಬಾಕಿ ಇರುತ್ತವೆ. |
| ಆ) | ಈ ಪ್ರಕರಣಗಳಲ್ಲಿ ನ್ಯಾಯಾಲಯವು ತಾಲ್ಲೂಕು ಮಂಜೂರಾತಿ ಆದೇಶವನ್ನು ರದ್ದುಗೊಳಿಸಿ ಪುನರ್ ಪರಿಶೀಲನೆಗಾಗಿ ಸಮಿತಿಗೆ ವಾಪಸ್ಸು ಕಳುಹಿಸಿದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲು ಮಂಜೂರಾತಿ ಸಮಿತಿ ಕಾರ್ಯನಿರ್ವಹಿಸುತ್ತಿದೆಯೇ; | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94-ಎ(4) ರಲ್ಲಿನ ಕೋಷ್ಟಕದಲ್ಲಿ ನಿರ್ದಿಷ್ಟಪಡಿಸಿರುವಂತೆ ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 18 ಕಿ.ಮೀ. ವ್ಯಾಪ್ತಿಯೊಳಗೆ ಇರುವುದರಿಂದ ನಿರ್ಬಂಧಿತ ಅಂತರದೊಳಗಿನ ಈ ತಾಲ್ಲೂಕಿಗೆ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ರಚಿಸಲು ಕಾಯ್ದೆ / ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಇ) | ಬಗರ್ ಹುಕುಂ ಸಮಿತಿ ಕಾರ್ಯನಿರ್ವಹಿಸುತ್ತಿಲ್ಲದ ಪಕ್ಷದಲ್ಲಿ ಅಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಸುಳ್ಳು ಅಥವಾ ಮೋಸಗಾರಿಕೆ ನಿರೂಪಣೆಯ ಮೂಲಕ ಭೂ ಮಂಜೂರಾತಿ ಪಡೆಯಲಾಗಿದ್ದರೆ, ಅಥವಾ ಅದು ನಿಯಮಗಳಿಗೆ ವಿರುದ್ಧವಾಗಿದ್ದರೆ ಅಂತಹ ಜಮೀನುಗಳನ್ನು ಮರಳಿ ಪಡೆಯಲು ಸಹಾಯಕ ಆಯುಕ್ತರಿಗೆ ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108-ಕೆ ಅನ್ವಯ ಅಧಿಕಾರ ನೀಡಲಾಗಿದೆ.<br><br>ಅದರನ್ವಯ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿನ ಅಂತಿಮ ಆದೇಶದಂತೆ ನಿಯಮಾನುಸಾರ ಕ್ರಮವಹಿಸಲಾಗುವುದು. |

ಸಂಖ್ಯೆ: ಆರ್‌ಡಿ 117 ಎಲ್‌ಜಿಕ್ಯೂ 2020

(ಆರ್. ಅಶೋಕ)
ಕಂದಾಯ ಸಚಿವರು